ಯುಸಿರೆಳೆದರು ಎನ್ನುವುದು ನೋಡಿದರೆ ನಿಜಕ್ಕೂ ಅವರ ಮಹತ್ವ ತಮಗೆ ಗೊತ್ತಾಗಲಿಲ್ಲ. ಅವರು ತೀರಿಕೊಂಡ ಮೇಲೆ, ಬೆಂಗಳೂರಿನಲ್ಲಿ, ಇಡೀ ದೇಶದಲ್ಲಿ ಅವರ ಬಗ್ಗೆ ಮೆಚ್ಚುಗೆ ಮಾತು ಬಂದಂಥದ್ದು ಇದೆ 12 ಭಾಷೆಗಳಲ್ಲಿ ಒಟ್ಟು 3863 ಗೀತೆಗಳನ್ನು ಹಾಡಿದ್ದರು. ಬಹಳ ಮುಖ್ಯವಾಗಿ ಕನ್ನಡದ ಸಂಗೀತಕ್ಕೆ ಅಪಾರವಾದ ಕೊಡುಗೆ ಕೊಟ್ಟಿದ್ದರು. ಡಿ.ರಾಜೇಂದ್ರ ಬಾಬುರವರು ಚಲನಚಿತ್ರ ಕ್ಷೇತ್ರದಲ್ಲಿ ತಮ್ಮದೇ ಆದಂಥ ಸಾಧನೆಯನ್ನು ಮಾಡಿ ನಿರ್ದೇಶಕರಾಗಿ ಸುಮಾರು 50ಕ್ಕೂ ಹೆಚ್ಚು ಚಲನಚಿತ್ರಗಳನ್ನು ನಿರ್ದೇಶಿಸಿದ್ದರು

ಇಂಥ ಹಿರಿಯ ವ್ಯಕ್ತಿಗಳನ್ನು ಕಳೆದುಕೊಂಡು ಈ ನಾಡು ಬಡವಾಗಿದೆ. ಅವರೆಲ್ಲರ ಆತ್ಮಕ್ಕೆ ಶಾಂತಿ ಕೋರಿ, ಅವರ ಕುಟುಂಬ ವರ್ಗದವರಿಗೆ ಇದನ್ನು ತಡೆದುಕೊಳ್ಳುವಂಥ ಶಕ್ತಿಯನ್ನು ಭಗವಂತ ಕೊಡಲಿ ಎಂದು ದೇವರಲ್ಲಿ ಪ್ರಾರ್ಥನೆ ಮಾಡಿ ಈ ಸಂತಾಪ ಸೂಚನಾ ನಿರ್ಣಯಕ್ಕೆ ನನ್ನ ಬೆಂಬಲ ಸೂಚಿಸಿ, ನನ್ನ ಮಾತು ಮುಗಿಸುತ್ತೇನೆ.

ಅಧ್ಯಕ್ಷರು: ದಿವಂಗತರುಗಳಿಗೆ ಗೌರವ ಸೂಚಿಸುವ ಸಲುವಾಗಿ ಮಾನ್ಯ ಸದಸ್ಯರೆಲ್ಲರೂ ಎದ್ದು ನಿಂತು ಒಂದು ನಿಮಿಷ ಕಾಲ ಮೌನವನ್ನಾಚರಿಸ ಬೇಕೆಂದು ಕೇಳಿಕೊಳ್ಳುತ್ತೇನೆ.

(ಮೃತರ ಗೌರವಾರ್ಥ ಸದನದ ಸದಸ್ಯರೆಲ್ಲರೂ ಎದ್ದು ನಿಂತು ಒಂದು ನಿಮಿಷ ಮೌನವನ್ನಾಚರಿಸಿದರು.)

ಅಧ್ಯಕ್ಷರು: ಸದನವು ಅಂಗೀಕರಿಸಿದ ಸಂತಾಪ ಸೂಚನೆ ನಿರ್ಣಯದ ಪ್ರತಿಯನ್ನು ಮೃತರ ಕುಟುಂಬಕ್ಕೆ ಕಳುಹಿಸಿಕೊಡಲಾಗುವುದು.

3. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿ: ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿ/ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಹದಿನಾಲ್ಕನೇ ವಿಧಾನಸಭೆಗೆ ಸಂಬಂಧಪಟ್ಟಂತೆ ರಾಷ್ಟ್ರಪತಿಯವರಿಂದ /ರಾಜ್ಯಪಾಲರಿಂದ ಒಪ್ಪಿಗೆಯನ್ನು ಪಡೆದಿರತಕ್ಕ ವಿಧೇಯಕಗಳ ಪಟ್ಟಿ

ಕ್ರಮ ಸಂಖ್ಯೆ	ವಿಧೇಯಕದ ಹೆಸರು	ಒಪ್ಪಿಗೆಯನ್ನು ಪಡೆದ ದಿನಾಂಕ	ಒಪ್ಪಿಗೆಯನ್ನು ನೀಡಿದವರು
1.	ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2012	06.07.2013	ರಾಜ್ಯಪಾಲರು
2.	ಅರ್ಕ ವಿಶ್ವವಿದ್ಯಾಲಯ ವಿಧೇಯಕ, 2012	13.03.2013	ರಾಜ್ಯಪಾಲರು
3.	ಮಣಿಪಾಲ ವಿಶ್ವವಿದ್ಯಾಲಯ ಬೆಂಗಳೂರು ವಿಧೇಯಕ, 2012	25.03.2013	ರಾಜ್ಯಪಾಲರು
4.	ರಾಯ್ ತಾಂತ್ರಿಕ ವಿಶ್ವವಿದ್ಯಾಲಯ ಬೆಂಗಳೂರು ವಿಧೇಯಕರ, 2012	12.03.2013	ರಾಜ್ಯಪಾಲರು
5.	ನ್ಯೂ ಬಾಲ್ಡ್‌ವಿನ್ ವಿಶ್ವವಿದ್ಯಾಲಯ ವಿಧೇಯಕ, 2013	27.03.2013	ರಾಜ್ಯಪಾಲರು
6	ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ(ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ)	02.02.2013	ರಾಜ್ಯಪಾಲರು

	ವಿಧೇಯಕ, 2012		
7.	ಕರ್ನಾಟಕ ಧನ ವಿನಿಯೋಗ (ಸಂಖ್ಯೆ:02) ವಿಧೇಯಕ, 2013	31 07 2013	ರಾಜ್ಯಪಾಲರು
8.	ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕ, 2013	31.07 2013	ರಾಜ್ಯಪಾಲರು
9.	ಕರ್ನಾಟಕ ಮೌಲವರ್ಧಿತ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ, 2013	31.07.2013	ರಾಜ್ಯಪಾಲರು
10.	ಕರ್ನಾಟಕ ಎಣ್ಣೆ ತಾಳೆ (ಸಾಗವಳಿ, ಉತ್ಪಾದನೆ ಮತ್ತು ಸಂಸ್ಕರಣೆ ನಿಯಂತ್ರಣ) ವಿಧೇಯಕ, 2013	19.08.2013	ರಾಜ್ಯಪಾಲರು
11	ಕರ್ನಾಟಕ ಪೌರ ನಿಗಮಗಳ (ತಿದ್ದುಪಡಿ) ವಿಧೇಯಕ, 2013	19.08.2013	ರಾಜ್ಯಪಾಲರು
12.	ಕರ್ನಾಟಕ ಧನ ವಿನಿಯೋಗ (ಸಂಖ್ಯೆ:03) ವಿಧೇಯಕ, 2013	25.08.2013	ರಾಜ್ಯಪಾಲರು
13.	ಕರ್ನಾಟಕ ಸರ್ಕಾರಿ ಉದ್ಯಾನವನಗಳ	27.08.2013	ರಾಜ್ಯಪಾಲರು

	(ಸಂರಕ್ಷಣೆ) (ತಿದ್ದುಪಡಿ) ವಿಧೇಯಕ, 2013		
14.	ಕರ್ನಾಟಕ ಪೌರ ನಿಗಮಗಳ (ತಿದ್ದುಪಡಿ) ವಿಧೇಯಕ, 2013	03.09.2013	ರಾಜ್ಯಪಾಲರು
15	ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕ, 2013	02.08 2013	ರಾಜ್ಯಪಾಲರು
16	ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕ, 2013	21.06.2013	ರಾಜ್ಯಪಾಲರು

ಶ್ರೀ ವೈ.ಎಸ್.ವಿ.ದತ್ತ: ಸನ್ಮಾನ್ಯ ಸಭಾಧ್ಯಕ್ಷರೆ ನಾವು ಮೃತರ ಆತ್ಮಕ್ಕೆ ಶಾಂತಿ ಕೋರುತ್ತಿರುವುದು ನಂಬಿಕೆಯೋ, ಮೌಢ್ಯವೋ ಎನ್ನುವ ಜಿಜ್ಞಾಸೆ ಕಾಡುತ್ತಿದೆ. ಮೃತರ ಆತ್ಮಕ್ಕೆ ಶಾಂತಿ ಕೋರುವುದು, ಇದು ಆತ್ಮಗಳಿಗೆ ಮುಟ್ಟುತ್ತದೆಯೋ, ಇಲ್ಲವೋ? ಮೌಢ್ಯವೋ ಅಥವಾ ನಂಬಿಕೆಯೋ ಎನ್ನುವ ಜಿಜ್ಞಾಸೆ ನನ್ನನ್ನು ಕಾಡುತ್ತಿದೆ

ಅಧ್ಯಕ್ಷರು: ನೀವು ಏನು ಹೇಳಿದಿರೋ ನನಗೆ ಅರ್ಥವಾಗಲಿಲ್ಲ.